# ಸಕಲೇಶಪುರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವ ನ್ಯಾಯಾಲಯದಲ್ಲಿ

## ಸಿ.ಸಿ. ನಂ. 1031/2023

| | | |
|---|---|---|
| ಸಾಕ್ಷಿದಾರರ ಹೆಸರು | ಪ್ರಸಾದ್ | P.W-3 |
| ತಂದೆಯ / ಗಂಡನ ಹೆಸರು | ದೇವಯ್ಯ | C.W-5 |
| ವಯಸ್ಸು | 50 ವರ್ಷ | |
| ಉದ್ಯೋಗ | ಚಾಲಕ | |
| ವಾಸ ಸ್ಥಳ | ಕುಶಾಲನಗರ ಬಡಾವಣೆ, ಸಕಲೇಶಪುರ | ದಿನಾಂಕ 13-07-2026 |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಿಪಿ 2 ಮಹಜರ್ ನಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ನಿಪಿ 2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಾನು ನಿಪಿ 2 ರ ದಾಖಲೆಯನ್ನು ಓದಿ ನೋಡಿರುವುದಿಲ್ಲ. ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ನನ್ನ ಜೊತೆ ನಿಪಿ 2 ರ ದಾಖಲೆಗೆ ಬೇರೆ ಯಾರೂ  ಸಹಿ ಮಾಡಿರುವುದಿಲ್ಲ. ಸುಮಾರು 3 ವರ್ಷಗಳ ಹಿಂದೆ ನಿಪಿ 2 ರ ದಾಖಲೆಗೆ ನಾನು ಪೊಲೀಸ್ ಠಾಣೆಯಲ್ಲಿ  ಸಹಿ ಮಾಡಿರುತ್ತೇನೆ. ಈಗ ನನಗೆ ತೋರಿಸಿದ ನಿಪಿ 3, 4 ಮತ್ತು 6 ಛಾಯಾಚಿತ್ರಗಳಲ್ಲಿ ನಾನು ಹಾಜರಿರುತ್ತೇನೆ. ಯಾವ ಕಾರಣಕ್ಕಾಗಿ ಸದರಿ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಮಹಜರ್ ಪೂರ್ವದಲ್ಲಿ ಪೊಲೀಸರು ನನಗೆ ಯಾವುದೇ ನೋಟೀಸ್ ನೀಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಪೊಲೀಸರು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)

**ಪಾಟೀ ಸವಾಲುಃ ಮಾನ್ಯ ಸ.ಸ.ಅ ರವರಿಂದಃ-**

ದಿನಾಂಕಃ 18-08-2023 ರಂದು ಮಧ್ಯಾಹ್ನ 11.15 ರಿಂದ 12.00 ಗಂಟೆಯವರೆಗೆ ನನ್ನ ಮತ್ತು ಚಾಸಾ 6 ರವರ ಸಮಕ್ಷಮ ಪೊಲೀಸರು ತಕ್ಷೀರು ಸ್ಥಳದಲ್ಲಿ ಮಹಜರ್ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಾನು ನಿಪಿ 2 ರ ದಾಖಲೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಮಹಜರ್ ಕಾಲದಲ್ಲಿ ಪೊಲೀಸರು ನನ್ನ ಮತ್ತು ಚಾಸಾ 6 ರವರ ಸಮಕ್ಷಮ ಕೆ ಎ 46 ಜೆ 2653 ನಂಬರಿನ ದ್ವಿ ಚಕ್ರ ವಾಹನ ಮತ್ತು ಗೋಮಾಂಸವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಪ್ರಕರಣದ ವಿದ್ಯಮಾನಗಳನ್ನು ನನಗೆ ಮತ್ತು ಚಾಸಾ 6 ರವರಿಗೆ ಪೊಲೀಸರು ತಿಳಿಸಿ ತಕ್ಷೀರು ಸ್ಥಳದಲ್ಲಿ ನನ್ನಮತ್ತು ಚಾಸಾ 6 ರವರ ಸಮಕ್ಷಮ ನಿ.ಪಿ 2 ರಂತೆ ಮಹಜರ್ ಮಾಡಿ, ಗೋಮಾಂಸವನ್ನು ಅಮಾನತ್ತುಪಡಿಸಿಕೊಂಡಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಮಹಜರ್ ಕಾಲದಲ್ಲಿ ನಿಪಿ 3 ರಿಂದ 6 ರಂತೆ ಛಾಯಾಚಿತ್ರಗಳನ್ನು ಪೊಲೀಸರು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ.

ಈ ಬಗ್ಗೆ ನನಾು ದಿಃ 20-08-2023 ರಂದು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಸದರಿ ಹೇಳಿಕೆಯನ್ನು ಓದಿ ಹೇಳಿದ್ದು, ಸಾಕ್ಷಿಯು ಸದರಿ ಹೇಳಿಕೆಯ ಸಂಪೂರ್ಣ ಭಾಗವನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ 7 ಎಂದು ಗುರುತಿಸಲಾಯಿತು. ನಿಪಿ 2 ಮತ್ತು 7 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸಇ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ , ಸಕಲೇಶಪುರ

ಸಾಕ್ಷಿಯ ಸಹಿ